**ಸಾಕ್ಷಿಯನ್ನು ಕರೆಯಿಸಿ ಪ್ರಮಾಣಿಕರಿಸಲಾಯಿತು, ದಿನಾಂಕಃ23.09.2022.**

**ಮುಖ್ಯ ವಿಚಾರಣೆಃ- ಪಿರ್ಯಾದಿದಾರರ ಪರ ವಕೀಲರಿಂದಃ-**

ನಾನು ನನ್ನ ಮೌಖಿಕ ಮುಖ್ಯ ವಿಚಾರಣೆ ಬದಲಾಗಿ ಪ್ರಮಾಣ ಪತ್ರವನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯದಿಂದ ಕೂಡಿದ್ದು ಅದನ್ನು ನನ್ನ ಸೂಚನೆ ಮೇರೆಗೆ ತಯಾರಿಸಲಾಗಿರುತ್ತದೆ. ನಾನು ಅದನ್ನು ಓದಿ, ತಿಳಿದುಕೊಂಡು ಸಹಿ ಮಾಡಿರುತ್ತೇನೆ. ಪಿರ್ಯಾದಿಗೆ ಸಂಬಂಧಪಟ್ಟ ದಾಖಲೆಗಳು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ.

ಈಗ ನೋಡುತ್ತಿರುವ ಚೆಕ್ ಆರೋಪಿ ನನಗೆ ನೀಡಿದ ಚೆಕ್ ಇರುತ್ತದೆ. ಸಾಕ್ಷಿ ನೋಡಿ ಗುರುತಿಸಿದ ಸದರಿ ಚೆಕ್ ನ್ನು ನಿ.ಪಿ.1 ಎಂದು ಗುರುತಿಸಲಾಯಿತು. ಸದರಿ ಚೆಕ್ ನಲ್ಲಿ ಇರುವ ಆರೋಪಿಯ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿ.ಪಿ.1(ಎ) ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ಕೆನರಾ ಬ್ಯಾಂಕ್, ಬ್ರಾಂಚ್ ಜಗಳೂರು ಇವರು ನೀಡಿದ ಮೆಮೋ ಹಾಜರುಪಡಿಸುತ್ತಿದ್ದು ಅದನ್ನು ನಿ.ಪಿ.2 ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ನಾನು ಆರೋಪಿಗೆ ನೀಡಿದ ಲೀಗಲ್ ನೋಟೀಸಿನ ಪ್ರತಿಯನ್ನು ಹಾಜರುಪಡಿಸುತ್ತಿದ್ದು ಅದನ್ನು ನಿ.ಪಿ.3 ಎಂದು ಗುರುತಿಸಲಾಯಿತು ಮತ್ತು ಅದಕ್ಕೆ ಸಂಬಂದಪಟ್ಟ ಒಂದು ಅಂಚೆ ಲಕೋಟೆ ಹಾಜರುಪಡಿಸುತ್ತಿದ್ದು ಅದನ್ನು ನಿ.ಪಿ.4 ಎಂದು ಗುರುತಿಸಲಾಯಿತು. ಸದರಿ ಲಕೋಟೆಯಲ್ಲಿರುವ ಲೀಗಲ್ ನೊಟೀಸನ್ನು ನಿ.ಪಿ.5 ಎಂದು ಗುರುತಿಸಲಾಯಿತು.

ನನ್ನ ಪಿರ್ಯಾದಿಯಲ್ಲಿ ಕೋರಿರುವಂತೆ ಆದೇಶ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲುಃ** ಆರೋಪಿ ಪರ ವಕೀಲರಿಂದಃ-

(ಈ ಹಂತದಲ್ಲಿ ಆರೋಪಿ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದರಿಂದ, ಪಾಟೀ ಸವಾಲು ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

ಸಿವಿಲ್ ನ್ಯಾಯಾಧೀಶರು, ಜಗಳೂರು